## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 182/2021**

ಫಿರ್ಯಾದಿದಾರ : ಜಯಲಕ್ಷ್ಮಮ್ಮ ಕೋಂ ಪ್ರೇಮಕುಮಾರ್,
ಸುಮಾರು 45 ವರ್ಷ ವಯಸ್ಸು,
ವಾಸಃ ಹಬ್ಬನಕುಪ್ಪೆ ಗ್ರಾಮ,
ಹನಗೋಡು ಹೋಬಳಿ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

ವಿರುದ್ಧ,

ಆರೋಪಿ/ಗಳು : ಚಂದ್ರ ಬಿನ್ ಲೇಟ್. ದೊಡ್ಡತಮ್ಮೇಗೌಡ ,
ಸುಮಾರು 55 ವರ್ಷ ವಯಸ್ಸು,
ವಾಸಃ ಹಬ್ಬನಕುಪ್ಪೆ ಗ್ರಾಮ ,
ಹನಗೋಡು ಹೋಬಳಿ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

### ಆಪಾದನೆ

ಆರೋಪಿಯಾದ ನೀವು, ಫಿರ್ಯಾದುದಾರರಿಂದ ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ರೂ.4,75,000/- ಹಣವನ್ನು ಕಾನೂನುಬದ್ಧ ಅವಶ್ಯಕತೆಗಾಗಿ ದಿ.01.08.2020 ರಂದು ಸಾಲವಾಗಿ ಪಡೆದು ಸದರಿ ಸಾಲದ ಹಣವನ್ನು ಮರುಪಾವತಿಸಲು, 01.10.2020ರ ದಿನಾಂಕ ಇರುವ ಮಂಗಳೂರು ಮುಖ್ಯ ಶಾಖೆಯ ಕರ್ನಾಟಕ ಬಾಂಕ್ ಲಿ. ಬ್ಯಾಂಕಿನ ಚೆಕ್ ಸಂಖ್ಯೆ- 225669 ಅನ್ನು ನಮೂದಿಸಿ ರೂ.4,75,000/- ರ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಫಿರ್ಯಾದುದಾರರು ದಿನಾಂಕ 07.10.2020ರಂದು ತಮ್ಮ ಬ್ಯಾಂಕ್ ಖಾತೆ ಇರುವ ಚಿಲ್ಕುಂದ ಶಾಖೆಯ ಕರ್ನಾಟಕ ಬ್ಯಾಂಕ್ ಲಿಮಿಟೆಡ್‌ಗೆ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ, ಸದರಿ ಚೆಕ್ಕು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ "Insufficient Funds" ಎಂಬ ಹಿಂಬರಹದೊಂದಿಗೆ ಮಾನ್ಯವಾಗದೆ ದಿಃ 07.10.2020 ರಂದು ವಾಪಸ್ಸಾಗಿರುತ್ತದೆ. ಆದ್ದರಿಂದ ಫಿರ್ಯಾದುದಾರರು ತಮ್ಮ ವಕೀಲರ ಮುಖಾಂತರ ದಿಃ 10.10.2020 ರಂದು ನೊಂದಾಯಿತ ಅಂಚೆ ಮೂಲಕ ನೊಟೀಸನ್ನು ಕಳುಹಿಸಿದ್ದು, ಸದರಿ ನೋಟೀಸ್ ನಿಮಗೆ ಜಾರಿಯಾಗಿದ್ದರೂ ಅದಕ್ಕೆ ಉತ್ತರವನ್ನು ನೀಡಿರುವುದಿಲ್ಲ ಹಾಗೂ ಹಣವನ್ನು ಹಿಂದಿರುಗಿಸಿರುವುದಿಲ್ಲ. ಆದಕಾರಣ ನೀವು ಎನ್.ಐ ಆ್ಯಕ್ಟ್ ಕಲಂ 138ರಂತೆ ಶಿಕ್ಷಾರ್ಹ ಅಪರಾಧ ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಮಾಡಲಾಗಿದೆ.

ಮೇಲ್ಕಂಡ ಅಪರಾದವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುವುದರಿಂದ, ನೀವು ಈ ನ್ಯಾಯಾಲಯದ ವಿಚಾರಣೆಗೆ ಒಳಪಡುತ್ತೀರಿ.

ಪ್ರಶ್ನೆ **1.** ಇದೀಗ ಓದಿ ವಿವರಿಸಿದ ಆಪಾದನೆ ನಿಮಗೆ ಅರ್ಥವಾಯಿತೆ**?**

ಉತ್ತರಃ

ಪ್ರಶ್ನೆ **2.** ಈ ಆಪಾದನೆಯ ಬಗ್ಗೆ ನೀವು ತಪ್ಪನ್ನು ಒಪ್ಪಿಕೊಳ್ಳುತ್ತೀರಾ ಅಥವಾ
ಯಾವುದಾದರೂ ಪ್ರತಿ ರಕ್ಷಣೆ ಇದೆಯೇ**?**

ಉತ್ತರಃ

ದಿಃ **08.08.2022**

(ಮನು ಪಟೇಲ್ ಬಿ.ವೈ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ದಂಢಾಧಿಕಾರಿಗಳು, ಹುಣಸೂರು